**All India Radio: Bangalore**
**National Bulletin In Kannada**
**16.01.2025 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**16.01.2025 07.35 a.m.**
**<><><><>**

ಮುಖ್ಯಾಂಶಗಳು

1. ರಕ್ಷಣಾ ಉತ್ಪಾದನೆ ಕಡಲ ಭದ್ರತೆಯಲ್ಲಿ ಭಾರತ ಜಾಗತಿಕ ನಾಯಕನಾಗುವತ್ತ ದಾಪುಗಾಲು
2. ತ್ವರಿತ ಇಮಿಗ್ರೇಷನ್ ಪ್ರಕ್ರಿಯೆ ಎಫ್‌ಟಿಐ-ಟಿಟಿಪಿ ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಂದ ಇಂದು ವಿದ್ಯುಕ್ತ ಚಾಲನೆ
3. ಗೋದಿ ಸಂಗ್ರಹಕ್ಕೆ ಒತ್ತು ನೀಡುವಂತೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ೫ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಸೂಚನೆ
4. ವಿಶ್ವದ ಗಮನ ಸೆಳೆದ ಪ್ರಯಾಗ್ ರಾಜ್‌ನ ಮಹಾಕುಂಭಮೇಳ ; ೧೦ ದೇಶಗಳ ನಿಯೋಗ ಇಂದು ಭೇಟಿ
5. ಖೋ ಖೋ ವಿಶ್ವಕಪ್ ; ಕ್ವಾರ್ಟರ್ ಫೈನಲ್‌ಗೆ ಆತಿಥೇಯ ಭಾರತ

<><><><>

ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ಮುಂಬೈನ ನೌಕಾ ನೆಲೆಯಲ್ಲಿ ಕಾರ್ಯಾರಂಭ ಮಾಡಲಿರುವ ಮುಂಚೂಣಿ ಯುದ್ಧ ನೌಕೆಗಳಾದ ಐಎನ್‌ಎಸ್ ಸೂರತ್, ಐಎನ್‌ಎಸ್ ನೀಲಗಿರಿ ಮತ್ತು ಜಲಾಂತರ್ಗಾಮಿ ಯುದ್ಧ ನೌಕೆ ಐಎನ್‌ಎಸ್ ವಾಘ್‌ಶೀರ್‌ಗಳನ್ನು ರಾಷ್ಟ್ರಕ್ಕೆ ಸಮರ್ಪಿಸಿದರು. ಐಎನ್‌ಎಸ್ ಸೂರತ್, ಐಎನ್‌ಎಸ್ ನೀಲಗಿರಿ ಮತ್ತು ಐಎನ್‌ಎಸ್ ವಾಘ್‌ಶೀರ್ ಯುದ್ಧ ನೌಕೆಗಳ ಕಾರ್ಯಾರಂಭ ರಕ್ಷಣಾ ಉತ್ಪಾದನೆ ಮತ್ತು ಕಡಲ ಭದ್ರತೆಯಲ್ಲಿ ಜಾಗತಿಕ ನಾಯಕನಾಗುವ ಭಾರತದ ದೃಷ್ಟಿಕೋನವನ್ನು ಸಾಕಾರಗೊಳಿಸುವಲ್ಲಿ ಮಹತ್ವದ ಹೆಜ್ಜೆಯಾಗಿದೆ. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಈ ದಿನ ಭಾರತದ ಕಡಲ ಪರಂಪರೆ, ನೌಕಾಪಡೆಯ ಇತಿಹಾಸದಲ್ಲಿ ಒಂದು ಮಹತ್ವದ ದಿನವಾಗಿದೆ. ಭಾರತದ ನೌಕಾಪಡೆಗೆ ಹೊಸ ರೂಪ ನೀಡಿದ್ದ ಛತ್ರಪತಿ ಶಿವಾಜಿ ಮಹಾರಾಜರ ಪುಣ್ಯಭೂಮಿಯಲ್ಲಿ ಇಂದು ೨೧ನೇ ಶತಮಾನದ ನೌಕಾಪಡೆಯನ್ನು ಸಶಕ್ತಗೊಳಿಸುವ ಪಥದಲ್ಲಿ ಪ್ರಮುಖ ಹೆಜ್ಜೆ ಇರಿಸಲಾಗಿದೆ ಎಂದರು. ರಕ್ಷಣಾ

ಸಚಿವ ರಾಜನಾಥ್ ಸಿಂಗ್ ಮಾತನಾಡಿ, ರಕ್ಷಣಾ ವಲಯದಲ್ಲಿ ದೇಶವನ್ನು ಸ್ವಾವಲಂಬಿಯನ್ನಾಗಿಸಲು ಕೇಂದ್ರ ಸರ್ಕಾರ ಎಲ್ಲ ರೀತಿಯ ಕ್ರಮಗಳನ್ನು ಕೈಗೊಂಡಿದೆ. ಹಲವು ಸುಧಾರಣಾ ಕ್ರಮಗಳನ್ನು ಕೈಗೊಂಡಿದ್ದು, ವರ್ಷಾಂತ್ಯಕ್ಕೆ ಉದ್ದೇಶಿತ ಗುರಿ ಕೈಗೂಡುವ ಸಾಧ್ಯತೆಗಳಿವೆ ಎಂದು ತಿಳಿಸಿದರು. ಯುದ್ಧ ನೌಕೆಗಳಾದ ಐಎನ್‌ಎಸ್ ಸೂರತ್ ಮತ್ತು ಐಎನ್‌ಎಸ್ ನೀಲಗಿರಿಯ ಶೇಕಡ ೭೫ ರಷ್ಟು ಭಾಗಗಳು ಭಾರತದಲ್ಲೇ ವಿಕಸನಗೊಳಿಸಲಾಗಿದೆ. ಆತ್ಮನಿರ್ಭರ ಭಾರತ ಧ್ಯೇಯದೊಂದಿಗೆ ಇತರ ವಲಯಗಳಲ್ಲೂ ದೇಶೀಯ ನಿರ್ಮಿತ ಉತ್ಪನ್ನಗಳ ಬಳಕೆ ಹೆಚ್ಚುತ್ತಿದೆ ಎಂದು ತಿಳಿಸಿದ್ದಾರೆ.

<><><><>

ಮುಂಬೈ, ಚೆನ್ನೈ, ಕೊಲ್ಕೊತ್ತಾ, ಬೆಂಗಳೂರು, ಹೈದರಾಬಾದ್, ಕೊಚ್ಚಿ ಮತ್ತು ಅಹಮದಾಬಾದ್ ವಿಮಾನ ನಿಲ್ದಾಣಗಳಲ್ಲಿ ತ್ವರಿತ ಇಮಿಗ್ರೇಷನ್ ಪ್ರಕ್ರಿಯೆ- ಎಫ್‌ಟಿಐ-ಟಿಟಿಪಿ ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಚಾಲನೆ ನೀಡಲಿದ್ದಾರೆ. ಇದು ಪ್ರಯಾಣಿಕರಿಗೆ ವಿಶ್ವದರ್ಜೆಯ ವಲಸೆ ಸೌಲಭ್ಯಗಳನ್ನು ಒದಗಿಸಲಿದೆ ಹಾಗೂ ಅಂತಾರಾಷ್ಟ್ರೀಯ ಪ್ರಯಾಣವನ್ನು ಸುಗಮ ಮತ್ತು ಸುರಕ್ಷಿತವಾಗಿಸುತ್ತದೆ. ಕೇಂದ್ರ ಗೃಹ ಸಚಿವಾಲಯದ ಪ್ರಕಾರ, ಈ ಕಾರ್ಯಕ್ರಮದಲ್ಲಿ ನೋಂದಾಯಿಸಿಕೊಳ್ಳಲು ಅರ್ಜಿದಾರರು ತಮ್ಮ ವಿವರಗಳನ್ನು ಭರ್ತಿ ಮಾಡುವ ಮೂಲಕ ಮತ್ತು ಅಗತ್ಯ ದಾಖಲೆಗಳನ್ನು **ftittp.mha.gov.in** ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವ ಮೂಲಕ ಆನ್‌ಲೈನ್ ನೋಂದಣಿಯನ್ನು ಪೂರ್ಣಗೊಳಿಸಬೇಕಾಗುತ್ತದೆ. ನೋಂದಾಯಿತ ಅರ್ಜಿದಾರರ ಬಯೋಮೆಟ್ರಿಕ್ ಮಾಹಿತಿಯನ್ನು ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿಯಲ್ಲಿ ಅಥವಾ ವಿಮಾನ ನಿಲ್ದಾಣದಲ್ಲಿ ಪಡೆಯಲಾಗುತ್ತದೆ. ನೋಂದಾಯಿತ ಪ್ರಯಾಣಿಕರು ಇ-ಗೇಟ್‌ನಲ್ಲಿ ತಮ್ಮ ವಿಮಾನಯಾನ ಬೋರ್ಡಿಂಗ್ ಪಾಸ್ ಅನ್ನು ಸ್ಕ್ಯಾನ್ ಮಾಡಬೇಕಾಗುತ್ತದೆ. ನಂತರ ತಮ್ಮ ಪಾಸ್‌ಪೋರ್ಟ್ ಅನ್ನು ಸ್ಕ್ಯಾನ್ ಮಾಡಬೇಕಾಗುತ್ತದೆ. ಆಗಮನ ಮತ್ತು ನಿರ್ಗಮನ ಎರಡು ಸ್ಥಳಗಳಲ್ಲಿ ಪ್ರಯಾಣಿಕರ ಬಯೋ ಮೆಟ್ರಿಕ್ ಅನ್ನು ಇ-ಗೇಟ್‌ಗಳಲ್ಲಿ ದೃಢೀಕರಿಸಲಾಗುತ್ತದೆ. ಈ ದೃಢೀಕರಣ ಯಶಸ್ವಿಯಾದ ನಂತರ ಇ-ಗೇಟ್ ಸ್ವಯಂ ಚಾಲಿತವಾಗಿ ತೆರೆಯುತ್ತದೆ. ಈ ಮೂಲಕ ವಲಸೆ ಅನುಮತಿ ನೀಡಲಾಗಿದೆ ಎಂದು ಪರಿಗಣಿಸಲಾಗುತ್ತದೆ. ದೇಶಾದ್ಯಂತ ೨೧ ಪ್ರಮುಖ ವಿಮಾನ ನಿಲ್ದಾಣಗಳಲ್ಲಿ ಎಫ್‌ಟಿಐ-ಟಿಟಿಪಿ ಅನ್ನು ಜಾರಿಗೆ ತರಲಾಗುತ್ತಿದೆ. ಕಳೆದ ವರ್ಷ ಜೂನ್‌ನಲ್ಲಿ

ನವದೆಹಲಿಯ ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ ಮೂರರಲ್ಲಿ ಎಫ್‌ಟಿಐ-ಟಿಟಿಪಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಚಾಲನೆ ನೀಡಿದ್ದರು.

<><><><>

೨೦೨೫-೨೬ನೇ ಸಾಲಿನ ಹಿಂಗಾರು ಮಾರುಕಟ್ಟೆ ಹಂಗಾಮಿನಲ್ಲಿ ಗೋದಿ ಸಂಗ್ರಹಕ್ಕೆ ಮಾಡಿಕೊಂಡಿರುವ ಸಿದ್ಧತೆಗಳ ಕುರಿತು ಕೇಂದ್ರ ಗ್ರಾಹಕ ವ್ಯವಹಾರಗಳು ಆಹಾರ ಮತ್ತು ನಾಗರಿಕ ಪೂರೈಕೆ ಖಾತೆ ಸಚಿವ ಪ್ರಲ್ಹಾದ್ ಜೋಶಿ ನಿನ್ನೆ ಗೋದಿ ಬೆಳೆಯುವ ೫ ರಾಜ್ಯಗಳ ಆಹಾರ ಖಾತೆ ಸಚಿವರೊಂದಿಗೆ ವರ್ಚುವಲ್ ಸಭೆ ನಡೆಸಿದರು. ಉತ್ತರಪ್ರದೇಶ, ಮಧ್ಯಪ್ರದೇಶ, ಬಿಹಾರ, ಗುಜರಾತ್ ಮತ್ತು ರಾಜಸ್ಥಾನಗಳ ಆಹಾರ ಖಾತೆ ಸಚಿವರೊಂದಿಗೆ ಅವರು, ಸುದೀರ್ಘ ಚರ್ಚೆ ನಡೆಸಿದರು. ಈ ರಾಜ್ಯಗಳಲ್ಲಿ ಗೋದಿ ಸಂಗ್ರಹಣೆಗೆ ಹೆಚ್ಚಿನ ಅವಕಾಶಗಳು ಇದ್ದು, ರಾಷ್ಟ್ರದ ಆಹಾರ ಭದ್ರತೆ ಕಾಪಾಡಿಕೊಳ್ಳುವಲ್ಲಿ ಈ ರಾಜ್ಯಗಳ ಕೊಡುಗೆ ಅಪಾರ ಎಂದು ಪ್ರಲ್ಹಾದ್ ಜೋಶಿ ಅವರು, ತಿಳಿಸಿದರು. ಗೋದಿ ಸಂಗ್ರಹ ಕಾರ್ಯಾಚರಣೆ ಮತ್ತು ಸಿದ್ಧತೆಗಳ ಕುರಿತು ಆಹಾರ ಖಾತೆ ಸಚಿವರು ವಿಶೇಷ ಗಮನ ಹರಿಸಬೇಕೆಂದು ಕೇಂದ್ರ ಸಚಿವರು ಮನವಿ ಮಾಡಿದರು.

<><><><>

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳವು ಜಾಗತಿಕವಾಗಿ ಗಮನ ಸೆಳೆಯುತ್ತಿದೆ. ಇದರ ಭಾಗವಾಗಿ ಹತ್ತು ದೇಶಗಳ ೨೧ ಸದಸ್ಯರ ನಿಯೋಗವು ಇಂದು ತ್ರಿವೇಣಿ ಸಂಗಮದಲ್ಲಿ ಪುಣ್ಯ ಸ್ನಾನ ಮಾಡಲಿದೆ. ವಿದೇಶಾಂಗ ಸಚಿವಾಲಯದ ಆಹ್ವಾನದ ಮೇರೆಗೆ ನಿಯೋಗವು ಪ್ರಯಾಗ್‌ರಾಜ್‌ಗೆ ಆಗಮಿಸಿದೆ. ವಾಸ್ತವ್ಯಕ್ಕಾಗಿ ಅರೆಲ್‌ನಲ್ಲಿರುವ ಟೆಂಟ್ ಸಿಟಿಯಲ್ಲಿ ವ್ಯವಸ್ಥೆ ಮಾಡಲಾಗಿದೆ. ಭೇಟಿ ಸಮಯದಲ್ಲಿ ನಿಯೋಗದ ಸದಸ್ಯರು ಮಹಾ ಕುಂಭಮೇಳ ಪ್ರದೇಶದಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ. ಪಾರಂಪರಿಕ ನಡಿಗೆಯಲ್ಲಿ ಸದಸ್ಯರು ಪ್ರಯಾಗ್‌ರಾಜ್‌ನ ಸಾಂಸ್ಕೃತಿಕ ಮತ್ತು ಐತಿಹಾಸಿಕ ಪರಂಪರೆಯನ್ನು ಕಣ್ತುಂಬಿಕೊಳ್ಳಲಿದ್ದಾರೆ. ಇಂದು ಹೆಲಿಕಾಪ್ಟರ್ ಮೂಲಕ ಮಹಾಕುಂಭ ಪ್ರದೇಶದ ವೈಮಾನಿಕ ನೋಟವನ್ನು ನಿಯೋಗದ ಸದಸ್ಯರು ಆನಂದಿಸಲಿದ್ದಾರೆ. ಅಂತಾರಾಷ್ಟ್ರೀಯ ನಿಯೋಗದಲ್ಲಿ ಫಿಜಿ, ಫಿನ್‌ಲ್ಯಾಂಡ್, ಗಯಾನ, ಮಲೇಷಿಯಾ, ಮಾರಿಷಸ್, ಸಿಂಗಾಪುರ, ದಕ್ಷಿಣ ಆಫ್ರಿಕಾ, ಶ್ರೀಲಂಕಾ, ಟ್ರಿನಿಡಾಡ್ ಮತ್ತು ಟೊಬಾಗೊ ಹಾಗೂ ಯೂನೈಟೆಡ್ ಅರಬ್ ಎಮಿರೇಟ್ಸ್ -ಯುಎಇ ಪ್ರತಿನಿಧಿಗಳು ಸೇರಿದ್ದಾರೆ. ಮತ್ತೊಂದೆಡೆ ಮಹಾಕುಂಭಮೇಳದಲ್ಲಿ ಸ್ವಚ್ಛತೆ, ನೈರ್ಮಲ್ಯ ಹಾಗೂ ಸ್ವಚ್ಛ ಮತ್ತು ಗುಣಮಟ್ಟದ

ಆಹಾರಕ್ಕೆ ಸರ್ಕಾರವು ವಿಶೇಷ ಒತ್ತು ನೀಡಿದೆ. ಲಕ್ಷಾಂತರ ಭಕ್ತರಿಗೆ ಸ್ವಚ್ಛ ಮತ್ತು ಗುಣಮಟ್ಟದ ಆಹಾರವನ್ನು ಆಹಾರ ಸುರಕ್ಷತಾ ಅಧಿಕಾರಿಗಳು ಖಚಿತ ಪಡಿಸುತ್ತಿದ್ದಾರೆ. ಮಹಾ ಕುಂಭಮೇಳವನ್ನು ೫ ವಲಯಗಳು ಮತ್ತು ೨೫ ಸೆಕ್ಟರ್‌ಗಳಾಗಿ ವಿಂಗಡಿಸಲಾಗಿದೆ. ಪ್ರತಿವಲಯದಲ್ಲಿ ಆಹಾರ ಸುರಕ್ಷತಾ ಅಧಿಕಾರಿಗಳು ನಿಯಮಿತವಾಗಿ ನೈರ್ಮಲ್ಯ ಮತ್ತು ಸುರಕ್ಷಿತಾ ಮಾನದಂಡಗಳನ್ನು ಮೇಲ್ವಿಚಾರಣೆ ನಡೆಸುತ್ತಿದ್ದಾರೆ.

<><><><>

ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ೨೦೨೫ರ ಮಹಾಕುಂಭಮೇಳದಲ್ಲಿ ಆರೋಗ್ಯ ರಕ್ಷಣೆಗೆ ವಿಶೇಷ ಒತ್ತು ನೀಡಲಾಗಿದೆ. ಈ ಮೇಳದಲ್ಲಿ ಏರ್ಪಡಿಸಿರುವ ನೇತ್ರ ಚಿಕಿತ್ಸಾ ಶಿಬಿರ ವಿಶೇಷ ಗಮನ ಸೆಳೆಯುತ್ತಿದೆ. ಶಿಬಿರದಲ್ಲಿ ೫ ಲಕ್ಷ ಓಪಿಡಿಗಳನ್ನು ತೆರೆಯಲಾಗಿದ್ದು, ಕುಂಭಮೇಳದಲ್ಲಿ ಪಾಲ್ಗೊಂಡಿರುವವರ ದೃಷ್ಟಿದೋಷ ನಿವಾರಣೆಗೆ ಅಗತ್ಯವಿರುವ ಎಲ್ಲ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಪ್ರತಿನಿತ್ಯ ೧೦ ಸಾವಿರ ತಜ್ಞವೈದ್ಯರು ಕುಂಭಮೇಳದಲ್ಲಿ ಪಾಲ್ಗೊಂಡಿರುವ ಭಕ್ತರಿಗೆ ದೃಷ್ಟಿದೋಷ ನಿವಾರಣೆಗೆ ಸಲಹೆ ಸೂಚನೆಗಳನ್ನು ನೀಡುತ್ತಿದ್ದಾರೆ. ನೇತ್ರ ಚಿಕಿತ್ಸಾ ಶಿಬಿರದ ಸಂಘಟನಾ ಸಮಿತಿಯ ಸದಸ್ಯ ಡಾ. ರಂಜನ್ ಭಾಜ್‌ಪೈ ಪ್ರತಿನಿತ್ಯ ದೃಷ್ಟಿದೋಷ ಇರುವ ಭಕ್ತರಿಗೆ ಸೂಕ್ತ ಸಲಹೆ ಹಾಗೂ ಚಿಕಿತ್ಸೆ ನೀಡಲು ೪೦ ತಜ್ಞ ವೈದ್ಯರ ತಂಡ ಕೆಲಸ ಮಾಡುತ್ತಿದೆ. ೧೦೦ ಮಂದಿ ನೇತ್ರ ತಪಾಸಣೆ ಮಾಡುವವರ ತಂಡ ಇದ್ದು, ಭಕ್ತರಿಗೆ ಸೂಕ್ತ ಚಿಕಿತ್ಸೆ ಮತ್ತಿತರ ಸೌಲಭ್ಯಗಳನ್ನು ಕಲ್ಪಿಸಲು ಮುಂದಾಗಿದೆ ಎಂದು ಆಕಾಶವಾಣಿಗೆ ತಿಳಿಸಿದ್ದಾರೆ.

<><><><>

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಸ್ಟಾರ್ಟ್‌ಅಪ್ ಇಂಡಿಯಾ ಉಪಕ್ರಮ ಜಾರಿಗೆ ಬಂದು ಇಂದಿಗೆ ೯ ವರ್ಷಗಳನ್ನು ಪೂರೈಸಿದೆ. ದೇಶದಲ್ಲಿ ಅನ್ವೇಷಣೆ ಮತ್ತು ಉದ್ಯಮ ಶೀಲತೆಯನ್ನು ಪ್ರೋತ್ಸಾಹಿಸುವ ಸಲುವಾಗಿ ಈ ಯೋಜನೆಯನ್ನು ಜಾರಿಗೆ ತರಲಾಗಿತ್ತು. ದೇಶದಲ್ಲಿ ನವೋದ್ಯಮ, ಸಂಸ್ಕೃತಿ ಮತ್ತು ಪರಿಸರ ಸ್ನೇಹಿ ಉದ್ಯಮಗಳನ್ನು ಸ್ಥಾಪಿಸುವ ಮೂಲಕ ಯುವ ಉದ್ಯಮಿಗಳಿಗೆ ಪ್ರೋತ್ಸಾಹ ನೀಡುವುದು ಈ ಯುವ ಉಪಕ್ರಮದ ಪ್ರಮುಖ ಉದ್ದೇಶವಾಗಿದೆ. ಉದ್ಯೋಗ ಬಯಸುವ ಯುವ ಸಮುದಾಯಕ್ಕೆ ಉದ್ಯೋಗಾವಕಾಶಗಳನ್ನು ಕಲ್ಪಿಸುವ ಜೊತೆಗೆ ಉದ್ಯೋಗಧಾತರನ್ನಾಗಿ ಪರಿವರ್ತಿಸುವುದು ಸ್ಟಾರ್ಟ್‌ಅಪ್ ಇಂಡಿಯಾದ ಪ್ರಮುಖ ಉದ್ದೇಶವಾಗಿದ್ದು, ಈ ಯೋಜನೆಯಡಿ ಹಲವಾರು ಕಾರ್ಯಕ್ರಮಗಳನ್ನು ಜಾರಿಗೆ ತರಲಾಗಿದೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ಮನ್ ಕಿ ಬಾತ್ ಮೂಲಕ ಈ ತಿಂಗಳ ೧೯ರ ಭಾನುವಾರದಂದು ಬೆಳಗ್ಗೆ ೧೧ ಗಂಟೆಗೆ ದೇಶ ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಚಿಂತನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೧೮ನೇ ಆವೃತ್ತಿಯಾಗಿದೆ. ಸಾರ್ವಜನಿಕರು ತಮ್ಮ ಸಲಹೆ, ಸೂಚನೆಗಳನ್ನು ಉಚಿತ ದೂರವಾಣಿ ೧೮೦೦-೧೧-೭೮೦೦ ಗೆ ಕರೆ ಮಾಡಿ ತಿಳಿಸಬಹುದಾಗಿದೆ.

<><><>

ನವದೆಹಲಿಯ ಇಂದಿರಾ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಖೋ ಖೋ ವಿಶ್ವಕಪ್ ೨೦೨೫ರ ಪಂದ್ಯದ ಚೊಚ್ಚಲ ಆವೃತ್ತಿಯಲ್ಲಿ ಅಮೋಘ ಪ್ರದರ್ಶನ ಮುಂದುವರೆಸಿರುವ ಆತಿಥೇಯ ಭಾರತದ ಪುರುಷರು ಹಾಗೂ ಮಹಿಳಾ ತಂಡಗಳು ಕ್ವಾರ್ಟರ್ ಫೈನಲ್ ತಲುಪಿವೆ. ಮಹಿಳಾ ತಂಡವು ೧೦೦-೧೬ ಅಂಕಗಳ ಅಂತರದಿಂದ ಇರಾನ್ ಎದುರು ಸುಲಭ ಗೆಲುವು ದಾಖಲಿಸಿದರೆ, ಪುರುಷರ ತಂಡ ೭೦-೩೮ರ ಅಂತರದಿಂದ ಪೆರು ಎದರು ಹ್ಯಾಟ್ರಿಕ್ ಜಯ ಸಾಧಿಸಿದೆ. ಇದರೊಂದಿಗೆ ಎರಡೂ ತಂಡಗಳು ಗುಂಪಿನ ಅಗ್ರಸ್ಥಾನ ಭದ್ರಪಡಿಸಿಕೊಂಡಿವೆ.

<><><>

ರೂರ್ಕೆಲಾದ ಬಿರ್ಸಾಮುಂಡಾ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಪುರುಷರ ಹಾಕಿ ಲೀಗ್ ೨೦೨೪-೨೫ರ ಪಂದ್ಯದಲ್ಲಿ ಶ್ರಾಚಿ ರಾರ್ಹ್ ಬೆಂಗಾಲ್ ಟೈಗರ್ಸ್ ತಂಡ ಯುಪಿ ರುದ್ರಾಸ್ ತಂಡವನ್ನು ೫-೩ ಗೋಲುಗಳಿಂದ ಮಣಿಸಿದೆ. ಇಂದು ರಾತ್ರಿ ರೂರ್ಕೆಲಾದಲ್ಲಿ ನಡೆಯಲಿರುವ ಪಂದ್ಯದಲ್ಲಿ ಎಸ್‌ಜಿ ಪೈಪರ್ಸ್, ವೇದಾಂತ ಕಳಿಂಗ ಲ್ಯಾನ್ಸ್‌ರ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೮-೧೫ಕ್ಕೆ ಆರಂಭವಾಗಲಿದೆ. ಮಹಿಳಾ ಹಾಕಿ ಇಂಡಿಯಾ ಲೀಗ್‌ನಲ್ಲಿ ಶ್ರಾಚಿ ರಾರ್ಹ್ ಬೆಂಗಾಲ್ ಟೈಗರ್ಸ್, ಒಡಿಶಾ ವಾರಿಯಾರ್ ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೬ ಗಂಟೆಗೆ ಪ್ರಾರಂಭವಾಗಲಿದೆ.

<><><>